ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 17 ನೇ ಮಾರ್ಚ್, 2020

ಅನರ್ಹರಿಗೂ ಬಿ.ಪಿ.ಎಲ್. ಕಾರ್ಡ್ ವಿತರಿಸಿರುವ ಕುರಿತು

ಡಾ|| ಜಯಮಾಲ ರಾಮಚಂದ್ರ(ನಾಮನಿರ್ದೇಶನ ಹೊಂದಿದವರು):-

1087 (1271) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಪ್ರಸ್ತುತ ರಾಜ್ಯದಲ್ಲಿ ಬಿ.ಪಿ.ಎಲ್. ಪಡಿತರ ಚೀಟಿಗಳ ಹಂಚಿಕೆ ಸ್ಥಗಿತಗೊಂಡಿರುವುದರಿಂದ ಬಡವರಿಗೆ ಪಡಿತರ ದೊರೆಯದೆ ಸಂಕಷ್ಟಕ್ಕೀಡಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಅನರ್ಹರಿಗೂ ಬಿ.ಪಿ.ಎಲ್. ಕಾರ್ಡ್ ವಿತರಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಈಗಾಗಲೇ ವಿತರಿಸಿರುವ ಅನರ್ಹ ಬಿ.ಪಿ.ಎಲ್. ಕಾರ್ಡ್‌ಗಳನ್ನು ಮುಟ್ಟುಗೋಲು ಹಾಕಿ ಅರ್ಹ ಫಲಾನುಭವಿಗಳಿಗೆ ಬಿ.ಪಿ.ಎಲ್. ಪಡಿತರ ಚೀಟಿಗಳನ್ನು ಹಂಚಿಕೆ ಮಾಡಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ? (ಮಾಹಿತಿಯನ್ನು ನೀಡುವುದು)